## 25. 28 ನೀರಾವರಿ ಯೋಜನೆ ಕಾಮಗಾರಿ ಪ್ರಗತಿ

ನಮ್ಮ ಸರ್ಕಾರ ನೀರಾವರಿ ಯೋಜನೆಗೆ ಪ್ರಥಮ ಆದ್ಯತೆ ನೀಡಿದೆ. ರಾಜ್ಯದಲ್ಲಿ ರೂ. 74 ಸಾವಿರ ಕೋಟಿ ವೆಚ್ಚದಲ್ಲಿ ಕುಡಿಯುವ ನೀರು, ಏತ ನೀರಾವರಿ, ಕೃಷಿ ಚಟುವಟಿಕೆಗೆ ನೀರೊದಗಿಸುವ ಹಾಗೂ ಕೆರೆ–ಕಟ್ಟೆಗಳಿಗೆ ನೀರು ತುಂಬಿಸುವ 28 ಕಾಮಗಾರಿಗಳಿಗೆ ಚಾಲನೆ ನೀಡಿದ್ದು, ಅವು ಪ್ರಗತಿಯಲ್ಲಿವೆ ಎಂದು ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಹೇಳಿದರು.

ಶ್ರೀರಂಗಪಟ್ಟಣದ ಕೃಷ್ಣರಾಜ ಸಾಗರ ಜಲಾಶಯಕ್ಕೆ ಬಾಗಿನ ಅರ್ಪಿಸಿದ ನಂತರ ವೇದಿಕೆ ಕಾರ್ಯಕ್ರಮದಲ್ಲಿ ಮಾತನಾಡಿ, ಕಾವೇರಿ ನದಿ ನೀರು ಸಂರಕ್ಷಿಸಿ, ವಿದ್ಯುತ್ ಉತ್ಪಾದನೆ, ಕೃಷಿ ಹಾಗೂ ಕುಡಿಯುವ ನೀರಿನ ಉದ್ದೇಶಕ್ಕೆ ರೂಪಿಸಲಾಗಿರುವ ಮೇಕೆದಾಟು ಯೋಜನೆ ಪ್ರಾರಂಭಕ್ಕೆ ಕ್ರಮ ವಹಿಸಲಾಗುವುದು. ಈಗಾಗಲೇ ಈ ಪ್ರಸ್ತಾವನೆ ಕೇಂದ್ರ ಸರ್ಕಾರದ ಮುಂದಿದ್ದು, ಅನುಮತಿ ಪಡೆದು ಯೋಜನೆ ರೂಪಿಸಲಾಗುವುದು ಎಂದರು.

ವೈದಿಕರಾದ ಭಾನುಪ್ರಕಾಶ್ ಶರ್ಮಾ ನೇತೃತ್ವದ ತಂಡ ಕಾವೇರಿ ಮಾತೆಗೆ ವಿವಿಧ ಪೂಜೆ ಸಲ್ಲಿಸಿತು. ಮಧ್ಯಾಹ್ನ 12.05ಕ್ಕೆ ಅಭಿಜಿನ್ ಮುಹೂರ್ತದಲ್ಲಿ ಕಾವೇರಿ ಮಾತೆಗೆ ಬಾಗಿನ ಅರ್ಪಿಸುವ ಮೂಲಕ 5 ಬಾರಿ ಬಾಗಿನ ಅರ್ಪಿಸಿದ ಹೆಗ್ಗಳಿಕೆಗೆ ಯಡಿಯೂರಪ್ಪ ಪಾತ್ರರಾದರು.

ಎಚ್.ಡಿ.ಕೋಟೆ ತಾಲ್ಲೂಕಿನ ಕಬಿನಿ ಜಲಾಶಯಕ್ಕೆ ಮುಖ್ಯಮಂತ್ರಿ ಬಾಗಿನ ಅರ್ಪಿಸಿದರು. ಬಳಿಕ ಕಬಿನಿ ಜಲಾಶಯದ ಕೆಳಭಾಗದಲ್ಲಿ ಮೇಲ್ಸೇತುವೆ ಹಾಗೂ ಸಂಪರ್ಕ ರಸ್ತೆ ಕಾಂಕ್ರೀಟೀಕರಣ ಕಾಮಗಾರಿಗಳಿಗೆ ಗುದ್ದಲಿಪೂಜೆ ಮಾಡುವ ಮೂಲಕ ಶಂಕುಸ್ಥಾಪನೆ ನೆರವೇರಿಸಿದರು.

ಆಧಾರ:ಉದಯವಾಣಿ, ದಿನಾಂಕ:22.08.2020